# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು,
ಬಿ.ಹೆಚ್. ರಸ್ತೆ, ತುಮಕೂರು. 572103 ದೂ.ಸಂ: 0816-2260220

ಸಂಖ್ಯೆ:ವಿವಿಕಾತು:2026-27:

ದಿನಾಂಕ: 18.05.2026

## :ದರಪಟ್ಟಿ ಆಹ್ವಾನ:

ವಿಷಯ: ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ವಾರ್ಷಿಕೋತ್ಸವ ಸಮಾರಂಭಕ್ಕೆ ಅವಶ್ಯಕ ವೇದಿಕೆ ಹಾಗೂ ಸಭಾಂಗಣ ಪರಿಕರಗಳನ್ನು ಸರಬರಾಜು ಮಾಡುವ ಸಂಬಂಧ ದರಪಟ್ಟಿ ಆಹ್ವಾನಿಸುತ್ತಿರುವ ಕುರಿತು.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ವಾರ್ಷಿಕೋತ್ಸವ ಸಮಾರಂಭಕ್ಕೆ ಅವಶ್ಯಕ ವೇದಿಕೆ ಹಾಗೂ ಸಭಾಂಗಣ ಪರಿಕರಗಳನ್ನು ಸರಬರಾಜು ಮಾಡುವ ಸಂಬಂಧ ಈ ಕೆಳಕಂಡ ಷರತ್ತು ಮತ್ತು ನಿಬಂದನೆಗಳೊಂದಿಗೆ ಅರ್ಹ ಏಜೆನ್ಸಿ/ಸಂಸ್ಥೆಗಳಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ಪರಿಕರಗಳ ವಿವರ | ಪ್ರಮಾಣ | ದರ |
|---|---|---|---|
| 1. | ಪ್ಲಾಸ್ಟಿಕ್ ಚೇರ್ ಗಳು | 800 | |
| 2. | ವೇದಿಕೆ ನೆಲಹಾಸು (ಕೆಂಪು) | 60’ X 40’ | |
| 3. | ಸೈಡ್ ವಾಲ್ | 80’ | |
| 4. | ಹಿಂಬದಿಯ ಸ್ಕ್ರೀನ್ (ನೀಲಿ) | 30’ X 60’ | |
| 5. | ರೆಡ್ ಕಾರ್ಪೆಟ್ | 10’ X 200’ | |
| 6. | ಬ್ಯಾರಿಕೇಡ್ | 16 | |

**ಷರತ್ತು ಮತ್ತು ನಿಬಂಧನೆಗಳು:**

1. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 25.05.2026 ಅಪರಾಹ್ನ 04.00** ಗಂಟೆಯವರೆಗೆ ಸಲ್ಲಿಸಬಹುದಾಗಿದ್ದು ದರಪಟ್ಟಿಗಳನ್ನು ಮುದ್ದಾಂ ಅಥವಾ ಅಂಚೆಯ ಮೂಲಕ ಸಲ್ಲಿಸಬಹುದು. ಯಾವುದೇ ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ಕಾಲೇಜು ಜವಾಬ್ದಾರರಾಗುವುದಿಲ್ಲ.
2. ದರಪಟ್ಟಿಯನ್ನು **ದಿನಾಂಕ: 26.05.2026 ರಂದು ಬೆಳಿಗ್ಗೆ 11.00 ಗಂಟೆಗೆ** ತೆರೆಯಲಾಗುವುದು.
3. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
4. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳವರೆಗೆ ಚಾಲ್ತಿಯಲಿರುತ್ತದೆ.
5. ಸರಬರಾಜು ಮಾಡಲು ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
6. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಕಾಮಗಾರಿ ವೆಚ್ಚವನ್ನು ಒಳಗೊಂಡಿರತಕ್ಕದ್ದು.

7. ದರಪಟ್ಟಿಯಲ್ಲಿ ನಮೂದಿಸಿರುವ ಕಾಮಗಾರಿಯನ್ನು ವಿಸ್ತರಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿರುತ್ತದೆ.

8. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿದೆ.

9. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ತೀರ್ಮಾನವೇ ಅಂತಿಮವಾಗಿರುತ್ತದೆ.

10. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.

11. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.

12. ಕಾರ್ಯಾದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

13. ಹೆಚ್ಚಿನ ವಿವರಗಳು ಅಥವಾ ಮಾಹಿತಿಯ ಅಗತ್ಯವಿದ್ದಲ್ಲಿ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ಇವರನ್ನು ಸಂಪರ್ಕಿಸಬಹುದು.

ಪ್ರಾಂಶುಪಾಲರು
ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು
ತುಮಕೂರು-572103

ಪ್ರತಿಗಳು:

1. ಸೂಚನಾ ಫಲಕ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
2. ಶ್ರೀ. ಹರೀಶ್ ಕುಮಾರ್ ಕೆ, ಸಂಯೋಜಕರು, ವೆಬ್ ಸೈಟ್ ಸಮಿತಿ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು. – ವಿಜ್ಞಾನ ಕಾಲೇಜಿನ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಿದೆ.
3. ಕಚೇರಿ ಪ್ರತಿ.